ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014–15 : ಮೇ 19, 2015

## ಪತ್ರಿಕಾ ಪ್ರಕಟಣೆ

# ಕರ್ನಾಟಕ ವಿಧಾನಸಭೆ

## ದಿನಾಂಕ:20–05–2015ರಂದು ಕೆರೆ ಒತ್ತುವರಿ ಸದನ ಸಮಿತಿಯು ವೀಕ್ಷಿಸುವ ಬೆಂಗಳೂರು ಪೂರ್ವ ತಾಲ್ಲೂಕಿನ ಕೆರೆಗಳ ಕಾರ್ಯಕ್ರಮ ಪಟ್ಟಿ

| | |
|---|---|
| ಬೆಳಿಗ್ಗೆ: 08.30 ಗಂಟೆಗೆ | ಶಾಸಕರ ಭವನದಲ್ಲಿ ಸಭೆ ಸೇರಿ ಹೊರಡುವುದು |
| ಬೆಳಿಗ್ಗೆ: 09.00 ಗಂಟೆಗೆ<br><br>ಬೆಳಿಗ್ಗೆ: 09.20 ಗಂಟೆಗೆ | 1. ಸ್ಯಾಂಕಿ ಕೆರೆಯ ವೀಕ್ಷಣೆಗೆ ಹೊರಡುವುದು. (20 ನಿಮಿಷ)<br>ಕೆರೆಯ ಪರಿಶೀಲನೆ |
| ಬೆಳಿಗ್ಗೆ: 09.50 ಗಂಟೆಗೆ<br><br><br>ಬೆಳಿಗ್ಗೆ: 10.45 ಗಂಟೆಗೆ | 2. ಚನ್ನಸಂದ್ರ–2 ಕೆರೆಯ ವೀಕ್ಷಣೆಗೆ ಹೊರಡುವುದು. (ಬಾಣಸವಾಡಿ ಕೆರೆ) ಹೆಬ್ಬಾಳ ಮೂಲಕ<br>ಕೆರೆಯ ಪರಿಶೀಲನೆ |
| ಬೆಳಿಗ್ಗೆ: 11.15 ಗಂಟೆಗೆ<br><br><br><br>ಬೆಳಿಗ್ಗೆ: 11.30 ಗಂಟೆಗೆ | 3. ವಿಜಿನಾಪುರ ಕೆರೆಯ ವೀಕ್ಷಣೆಗೆ ಹೊರಡುವುದು.<br>(15 ನಿಮಿಷ ರಾಮಮೂರ್ತಿ ನಗರ ರಸ್ತೆ ಮೂಲಕ)<br>ಕೆರೆಯ ಪರಿಶೀಲನೆ |
| ಮಧ್ಯಾಹ್ನ: 12.00 ಗಂಟೆಗೆ<br><br>ಮಧ್ಯಾಹ್ನ: 12.05 ಗಂಟೆಗೆ | 4. ಕೌದೇನಹಳ್ಳಿ ಕೆರೆಯ ವೀಕ್ಷಣೆಗೆ ಹೊರಡುವುದು. (5 ನಿಮಿಷ)<br>ಕೆರೆಯ ಪರಿಶೀಲನೆ |
| ಮಧ್ಯಾಹ್ನ: 12.30 ಗಂಟೆಗೆ | 5. ಬಿ.ನಾರಾಯಣಪುರ ಕೆರೆಯ |

| | |
|---|---|
| ಮಧ್ಯಾಹ್ನ: 1.00 ಗಂಟೆಗೆ | ವೀಕ್ಷಣೆಗೆ ಹೊರಡುವುದು.<br>ಕೆ.ಆರ್.ಪುರ ಬ್ರಿಡ್ಜ್ ಮೂಲಕ ಅರ್ಧ ಗಂಟೆ.<br>ಬಿ.ನಾರಾಯಣಪುರ ಕೆರೆ ಪರಿಶೀಲನೆ. |
| ಮಧ್ಯಾಹ್ನ: 01.30 ಗಂಟೆಗೆ | ಭೋಜನ ವಿರಾಮ |
| ಮಧ್ಯಾಹ್ನ: 02.30 ಗಂಟೆಗೆ<br>ಮಧ್ಯಾಹ್ನ: 3.00 ಗಂಟೆಗೆ | 6. ಶೀಲವಂತನ ಕೆರೆಯ ವೀಕ್ಷಣೆಗೆ ಹೊರಡುವುದು.<br>ಕೆರೆಯ ಪರಿಶೀಲನೆ |
| ಮಧ್ಯಾಹ್ನ: 03.30 ಗಂಟೆಗೆ<br>ಸಂಜೆ: 04.00 ಗಂಟೆಗೆ | 7. ಮುನ್ನೇನಕೊಳಲು ಕೆರೆಯ ವೀಕ್ಷಣೆಗೆ ಹೊರಡುವುದು.<br>(ಐ.ಟಿ.ಪಿ.ಎಲ್ ರಿಂಗ್ ರಸ್ತೆ ಮೂಲಕ)<br>ಕೆರೆಯ ಪರಿಶೀಲನೆ |
| ಸಂಜೆ: 04.30 ಗಂಟೆಗೆ<br>ಸಂಜೆ: 05.00 ಗಂಟೆಗೆ | 8. ಬೆಳ್ಳಂದೂರು ಕೆರೆಯ ವೀಕ್ಷಣೆಗೆ ಹೊರಡುವುದು. (ಅರ್ಧ ಗಂಟೆ)<br>ಕೆರೆಯ ಪರಿಶೀಲನೆ ನಂತರ ಶಾಸಕರ ಭವನಕ್ಕೆ ಹಿಂತಿರುಗುವುದು. |

## ಗ್ರಾಮ ಪಂಚಾಯತಿ ಚುನಾವಣೆ: ವ್ಯಾಪ್ತಿ ಪ್ರದೇಶದಲ್ಲಿ ರಜೆ ಘೋಷಣೆ

**ಬೆಂಗಳೂರು, ಮೇ 19 (ಕರ್ನಾಟಕ ವಾರ್ತೆ)**

ರಾಜ್ಯದಲ್ಲಿ ಮೇ 29 ಹಾಗೂ ಜೂನ್ 2 ರಂದು ನಡೆಯುವ ಗ್ರಾಮ ಪಂಚಾಯತಿ ಚುನಾವಣೆಗೆ ಸಂಬಂಧಿಸಿದಂತೆ ಎಲ್ಲ ಪಟ್ಟಣ ಪಂಚಾಯತಿ, ಪುರಸಭೆ, ನಗರಸಭೆ, ನಗರಪಾಲಿಕೆ, ಮಹಾನಗರಪಾಲಿಕೆ ಪ್ರದೇಶಗಳ ವ್ಯಾಪ್ತಿ ಹೊರತುಪಡಿಸಿ ಕೇವಲ ಗ್ರಾಮಪಂಚಾಯತಿ ವ್ಯಾಪ್ತಿಗೊಳಪಡುವ ಎಲ್ಲಾ ರಾಷ್ಟ್ರೀಕೃತ ಬ್ಯಾಂಕುಗಳು, ಇತರೆ ಬ್ಯಾಂಕುಗಳು, ಜೀವವಿಮಾ ನಿಗಮ ಮುಂತಾದ ಕಚೇರಿಗಳಿಗೆ ಸೀಮಿತಗೊಳಿಸಿ ರಾಜ್ಯ ಸರ್ಕಾರವು ಸಾರ್ವಜನಿಕ ರಜೆಯನ್ನು ಘೋಷಿಸಿದೆ. ಅಲ್ಲದೆ ಯಾವುದೇ ಬಿಸಿನೆಸ್ ಟ್ರೇಡ್, ಇಂಡಸ್ಟ್ರಿಯಲ್ ಅಂಡರ್‌ಟೇಕಿಂಗ್ ಅಥವಾ ಇನ್ನಿತರ ಎಸ್ಟಾಬ್ಲಿಷ್‌ಮೆಂಟ್‌ಗಳಲ್ಲಿ ಮತ್ತು ದಿನಗೂಲಿ ಮೇಲೆ ಕಾರ್ಯನಿರ್ವಹಿಸುತ್ತಿರುವ ನೌಕರರು ಮತದಾನ ದಿನಾಂಕದಂದು ವೇತನ ಸಹಿತ ರಜೆಗೆ ಅರ್ಹರಿರುತ್ತಾರೆ. ಈ ರಜೆಯು ತುರ್ತು ಸೇವೆಗಳಿಗೆ ಅನ್ವಯವಾಗುವುದಿಲ್ಲ.

ಅಲ್ಲದೆ ಚುನಾವಣಾ ಕಾರ್ಯಕ್ಕೆ ನಿಯೋಜಿಸಲ್ಪಟ್ಟ ಎಲ್ಲ ಸರ್ಕಾರಿ ನೌಕರರು ಸಂಬಂಧಿಸಿದ ದಿನಾಂಕಗಳಂದು ಚುನಾವಣಾ ಕಾರ್ಯಕ್ಕೆ ಹಾಜರಾಗಬೇಕು. ಮತಗಟ್ಟೆಗಳಲ್ಲಿ ಮತದಾನವು ಸುಸೂತ್ರವಾಗಿ

ನಡೆಯಲು ಅನುಕೂಲವಾಗುವಂತೆ ಮತದಾನ ನಡೆಯುವ ಮತಗಟ್ಟೆಗಳನ್ನು ಸರ್ಕಾರಿ ಕಚೇರಿಗಳಲ್ಲಿ ಹಾಗೂ ಸರ್ಕಾರಿ ಶಾಲೆಗಳಲ್ಲಿ ಸ್ಥಾಪಿಸಿದ್ದಲ್ಲಿ ಅಂತಹ ಕಚೇರಿ ಹಾಗೂ ಶಾಲೆಗಳಿಗೆ ಚುನಾವಣೆಯ ಹಿಂದಿನ ದಿನ ಮತದಾನ ಪೂರ್ವ ತಯಾರಿಗಾಗಿ ರಜೆ ಘೋಷಿಸಲು ಸಂಬಂಧಪಟ್ಟ ಚುನಾವಣಾಧಿಕಾರಿಗಳು ಕ್ರಮ ಕೈಗೊಳ್ಳುವರು.

ಈಗ ನಡೆದಿರುವ ಕರ್ನಾಟಕ ಗ್ರಾಮ ಪಂಚಾಯಿತಿ ಚುನಾವಣೆಯಲ್ಲಿ ಮೊದಲ ಹಂತದಲ್ಲಿ ಮೈಸೂರು, ಚಿಕ್ಕಮಗಳೂರು, ದಕ್ಷಿಣ ಕನ್ನಡ, ಹಾಸನ, ಕೊಡಗು, ಮಂಡ್ಯ, ಚಾಮರಾಜನಗರ, ಉಡುಪಿ, ಬೆಳಗಾವಿ, ವಿಜಯಪುರ, ಹಾವೇರಿ, ಬಾಗಲಕೋಟೆ, ಉತ್ತರ ಕನ್ನಡ, ಧಾರವಾಡ, ಹಾಗೂ ಗದಗ ಜಿಲ್ಲೆಗಳಲ್ಲಿ ಮೇ 29 ರಂದು ಚುನಾವಣೆ ನಡೆಯಲಿದೆ.

ಕರ್ನಾಟಕ ಗ್ರಾಮ ಪಂಚಾಯಿತಿ ಚುನಾವಣೆಯ ಎರಡನೇ ಹಂತದಲ್ಲಿ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಚಿತ್ರದುರ್ಗ, ದಾವಣಗೆರೆ, ಕೋಲಾರ, ಚಿಕ್ಕಬಳ್ಳಾಪುರ, ಶಿವಮೊಗ್ಗ, ತುಮಕೂರು, ಬೀದರ್, ಬಳ್ಳಾರಿ, ಕಲಬುರಗಿ, ಯಾದಗಿರಿ, ರಾಯಚೂರು ಹಾಗೂ ಕೊಪ್ಪಳ ಜಿಲ್ಲೆಗಳಲ್ಲಿ ಜೂನ್ 2 ರಂದು ಚುನಾವಣೆ ನಡೆಯಲಿದೆ.

ಅಲ್ಲದೆ ಮೇಲ್ಕಂಡ ಜಿಲ್ಲೆಗಳ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಚುನಾವಣಾ ದಿನದಂದು ಎಲ್ಲಾ ರಾಜ್ಯ , ಕೇಂದ್ರ ಸರ್ಕಾರದ ಕಛೇರಿಗಳಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಕಾರ್ಖಾನೆಗಳಿಗೆ ಕೈಗಾರಿಕಾ ಸಂಸ್ಥೆಗಳಿಗೆ ಶಿಕ್ಷಣ ಸಂಸ್ಥೆಗಳಿಗೆ ಅನುದಾನಿತ ಶಿಕ್ಷಣ ಸಂಸ್ಥೆಗಳೂ ಸೇರಿದಂತೆ ಶಾಲಾ ಕಾಲೇಜುಗಳಗೆ ವೇತನ ಸಹಿತ ಸಾರ್ವತ್ರಿಕ ರಜೆಯನ್ನು ಘೋಷಿಸಿ ಸರ್ಕಾರ ಆದೇಶ ಹೊರಡಿಸಿದೆ.

ಬಾಬು/ಕೆಎಂ

# ಗ್ರಾಮ ಪಂಚಾಯತಿ ಚುನಾವಣೆ : ನೀತಿ ಸಂಹಿತೆ ಬಗ್ಗೆ ಆಯೋಗದ ಸ್ಪಷ್ಟೀಕರಣ

ಬೆಂಗಳೂರು, ಮೇ 19 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಚುನಾವಣಾ ಆಯೋಗವು ಗ್ರಾಮ ಪಂಚಾಯತ್ ಚುನಾವಣೆಯಲ್ಲಿ ಅನುಸರಿಸಬೇಕಾದ ನೀತಿ ಸಂಹಿತೆ ಬಗ್ಗೆ ಕೆಳಕಂಡಂತೆ ಸ್ಪಷ್ಟೀಕರಣ ನೀಡಿದೆ.

ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಗಳು ಸಾಮಾನ್ಯ ಸಭೆಯನ್ನು ನಡೆಸಲು ನೀತಿ ಸಂಹಿತೆಯು ಅಡ್ಡಿಯಿರುವುದಿಲ್ಲ. ಆದರೆ, ಸದರಿ ಸಭೆಯಲ್ಲಿ ಯಾವುದೇ ಹೊಸ ಯೋಜನೆಗಳ ಅನುಷ್ಠಾನದ ಬಗ್ಗೆ ತೀರ್ಮಾನ ತೆಗೆದುಕೊಳ್ಳತಕ್ಕದ್ದಲ್ಲ. ಈಗಾಗಲೇ ಆಯವ್ಯಯ ಒದಗಿಸಿರುವ ಯೋಜನೆಗಳನ್ನು ಪ್ರಾರಂಭಿಸಲು ಅಥವಾ ಪ್ರಾರಂಭವಾಗಿದ್ದಲ್ಲಿ ಕೆಲಸ ಮುಂದುವರೆಸಲು ಯಾವುದೇ ಬಾಧಕವಿಲ್ಲ.

ಬರಪೀಡಿತ ಪ್ರದೇಶಗಳಲ್ಲಿ ಕುಡಿಯುವ ನೀರಿನ ಅಥವಾ ಈ ಯೋಜನೆಯಡಿ ಇತರೆ ಕಾಮಗಾರಿಗಳನ್ನು ತೆಗೆದುಕೊಂಡು ಅನುಷ್ಠಾನಗೊಳಿಸಲು ನೀತಿ ಸಂಹಿತೆಯು ಅಡ್ಡಿಯಿರುವುದಿಲ್ಲ. ಆದರೆ ಇಂತಹ ಯೋಜನೆಯ ಅನುಷ್ಠಾನವನ್ನು ಸಾರ್ವಜನಿಕ ಸಮಾರಂಭ ಅಥವಾ ರಾಜಕೀಯ ನಾಯಕರುಗಳ ಉಪಸ್ಥಿತಿಯಲ್ಲಿ ನಡೆಸುವುದನ್ನು ನಿಷೇಧಿಸಲಾಗಿದೆ.

ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿ ಅಧ್ಯಕ್ಷರು ಮತ್ತು ಉಪಾಧ್ಯಕ್ಷರುಗಳಿಗೆ ಹಾಗೂ ಎಪಿಎಂಸಿ ಅಧ್ಯಕ್ಷರಿಗೆ ಒದಗಿಸಲಾಗಿರುವ ಸರ್ಕಾರಿ ವಾಹನಗಳನ್ನು ಚುನಾವಣೆ ಮುಕ್ತಾಯವಾಗುವವರೆಗೆ ಜಿಲ್ಲಾದಿಕಾರಿಗಳ ವಶದಲ್ಲಿರಿಸಿಕೊಳ್ಳತಕ್ಕದ್ದು.

ಗ್ರಾಮ ಪಂಚಾಯತಿ ಚುನಾವಣೆಗಳು ಪಕ್ಷರಹಿತವಾಗಿ ನಡೆಯುವುದರಿಂದ ರಾಜಕೀಯ ಪಕ್ಷಗಳ ಚಿಹ್ನೆಗಳನ್ನು ಮತ್ತು ರಾಜಕೀಯ ಮುಖಂಡರ ಭಾವಚಿತ್ರಗಳನ್ನು ಉಪಯೋಗಿಸಿ ಪ್ರಚಾರ ಮಾಡಕೂಡದೆಂದು ಅಭ್ಯರ್ಥಿಗಳಿಗೆ ತಿಳಿಸುವುದು. ಒಂದು ವೇಳೆ ಅಂತಹ ಪ್ರಚಾರ ನಡೆಸಿದಲ್ಲಿ ಅಭ್ಯರ್ಥಿಯು ಮುದ್ರಿಸಿರುವ ಕರಪತ್ರ, ಪೋಸ್ಟರ್ ಅಥವಾ ಇನ್ನಾವುದೇ ಪ್ರಚಾರ ಸಾಮಗ್ರಿಗಳನ್ನು ಮುಟ್ಟುಗೋಲು ಹಾಕಿಕೊಳ್ಳುವುದು.

ಯಾವುದೇ ಸಾಂಸ್ಕೃತಿಕ ಹಾಗೂ ಧಾರ್ಮಿಕ ಸಭೆ ಮತ್ತು ಸಮಾರಂಭಗಳನ್ನು ನಡೆಸಲು ನೀತಿ ಸಂಹಿತೆಯ ಅಡ್ಡಿಯಿಲ್ಲ. ಆದರೆ ಇಂತಹ ಸಭೆ ಸಮಾರಂಭಗಳಲ್ಲಿ ರಾಜಕೀಯ ವ್ಯಕ್ತಿಗಳು ಭಾಗವಹಿಸಿ ನೀತಿ ಸಂಹಿತೆಗೆ ಭಾದಕವಾಗುವ ರೀತಿಯಲ್ಲಿ ಮತದಾರರ ಮೇಲೆ ಪರಿಣಾಮ ಬೀರುವಂತಹ ಯಾವುದೇ ಘೋಷಣೆ, ಹೇಳಿಕೆ ಅಥವಾ ಆಶ್ವಾಸನೆ ಇತ್ಯಾದಿಗಳನ್ನು ಮಾಡುವಂತಿಲ್ಲ.

ವಿಧಾನಮಂಡಲ ಮತ್ತು ಸಂಸತ್ ಸದಸ್ಯರುಗಳಿಗೆ ಜಿಲ್ಲಾ ಮಟ್ಟದಲ್ಲಿ ಅಥವಾ ತಾಲ್ಲೂಕು ಮಟ್ಟದಲ್ಲಿ ಅವರ ಸಾಮಾನ್ಯ ಕರ್ತವ್ಯ ನಿರ್ವಹಣೆಗೆ ಒದಗಿಸಲಾಗಿರುವ ವಾಹನವನ್ನು ಜಿಲ್ಲಾಧಿಕಾರಿಗಳು ವಶಕ್ಕೆ ತೆಗೆದುಕೊಳ್ಳುವ ಅಗತ್ಯವಿರುವುದಿಲ್ಲ. ಆದರೆ ಚುನಾವಣಾ ಪ್ರಚಾರಗಳಿಗೆ ಅಥವಾ ಚುನಾವಣಾ ಸಂಬಂಧದ ಸಭೆಗಳನ್ನು ನಡೆಸಲು ಸರ್ಕಾರಿ ವಾಹನಗಳನ್ನು ಬಳಸಿದ್ದಲ್ಲಿ ಅವುಗಳನ್ನು ತಕ್ಷಣ ವಶಪಡಿಸಿಕೊಳ್ಳಬಹುದು.

ನೇಮಕಾತಿಯನ್ನು ಈ ಸಮಯದಲ್ಲಿ ಅಂತಿಮಗೊಳಿಸಿ ನೇಮಕಾತಿ ಆಯ್ಕೆಪಟ್ಟಿ ಪ್ರಕಟಗೊಳಿಸಬಾರದು. ಒಟ್ಟಿನಲ್ಲಿ "ಮತದಾರರ ಮೇಲೆ ಪ್ರಭಾವ" ಬೀರುವಂತಹ ಯಾವುದೇ ಸರ್ಕಾರಿ ಕಾರ್ಯಕ್ರಮ ಅಥವಾ ಯೋಜನೆಯು ನಡೆಯದಂತೆ ನೋಡಿಕೊಳ್ಳತಕ್ಕದ್ದು.

ಜಿಲ್ಲಾ ಮಟ್ಟದಲ್ಲಿ / ತಾಲ್ಲೂಕು ಮಟ್ಟದಲ್ಲಿ ಪಡಿತರ ಚೀಟಿ ವಿತರಣೆ, ಗ್ರಾಮೀಣ ಭಾಗಗಳಿಗೆ ಯಾವುದೇ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನದಂತಹ ವಿಷಯಗಳಲ್ಲಿ ತೀರ್ಮಾನ ತೆಗೆದುಕೊಳ್ಳುವ ಸಭೆಗಳನ್ನು ಸಚಿವರು/ಶಾಸಕರು ಮತ್ತು ಅಧಿಕಾರಿಗಳು ನಡೆಸುವುದು ನೀತಿ ಸಂಹಿತೆಯ ಉಲ್ಲಂಘನೆಯಾಗುತ್ತದೆ.

ಯಾವುದೇ ತಾತ್ಕಾಲಿಕ ಹುದ್ದೆಗಳಿಗೆ ನೇಮಕಾತಿ ಮಾಡಲು ಅವಕಾಶವಿರುವುದಿಲ್ಲ. ಆದರೆ ಯಾವುದಾದರೂ ತುರ್ತು ಸೇವೆಗೆ ನೇಮಕಾತಿ ಅವಶ್ಯಕವಿದ್ದಲ್ಲಿ ಆಯೋಗದ ಅನುಮೋದನೆ ಪಡೆದು ನೇಮಕಾತಿ ಮಾಡಬಹುದು.

ಯಾವುದೇ ಇಲಾಖೆಯಲ್ಲಿ ಸಾಮಾನ್ಯ ಮುಂಬಡ್ತಿಯನ್ನು ನೀಡಲು ಯಾವುದೇ ಬಾಧಕವಿರುವುದಿಲ್ಲ.

ಚುನಾವಣೆಗಳಿಗೆ ನಿಯೋಜಿಸಿದ ಯಾವುದೇ ಸಿಬ್ಬಂದಿಯ ವರ್ಗಾವಣೆಯನ್ನು ಮಾಡುವಂತಿಲ್ಲ.

ನೀತಿ ಸಂಹಿತೆ ಜಾರಿಯಲ್ಲಿರುವ ಅವಧಿಯಲ್ಲಿ "ಜನ ಸ್ಪಂದನ ಸಭೆ" ನಡೆಸುವಂತಿಲ್ಲ ಎಂದು ರಾಜ್ಯ ಚುನಾವಣಾ ಆಯೋಗದ ಅಧೀನ ಕಾರ್ಯದರ್ಶಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಾಬು:ಜಿಪಿಆರ್.

## ಡಿಪ್ಲೋಮ ಪ್ರವೇಶಾತಿ : ಮೇ 30 ಕೊನೆಯ ದಿನ

**ಬೆಂಗಳೂರು, ಮೇ 19 (ಕರ್ನಾಟಕ ವಾರ್ತೆ)**

ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಸರ್ಕಾರದ ಆದೇಶದಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದವತಿಯಿಂದ ತಾಂತ್ರಿಕ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ 2015-16 ನೇ ಸಾಲಿಗೆ ಪ್ರಥಮ ಡಿಪ್ಲೋಮಾ ಪ್ರವೇಶಾತಿಯನ್ನು ಆನ್‌ಲೈನ್ ನಾನ್-ಇಂಟರಾಕ್ಟೀವ್ ಕೌನ್ಸಲಿಂಗ್ (ಆನ್‌ಲೈನ್ ಆಪ್ಷನ್ ಎಂಟ್ರಿ) ಮೂಲಕ ನಡೆಸುವ ಕುರಿತಂತೆ 124 ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ "ದಾಖಲೆ ಪರಿಶೀಲನೆ ಹಾಗೂ ಆನ್‌ಲೈನ್ ಅರ್ಜಿ ಸಲ್ಲಿಕೆ/ಆಪ್ಷನ್ ಎಂಟ್ರಿ ಸಹಾಯಕ ಕೇಂದ್ರಗಳಲ್ಲಿ ಪೂರ್ಣಾವಧಿಯ ವಿವಿಧ ಇಂಜಿನಿಯರಿಂಗ್ ಮತ್ತು ನಾನ್ ಇಂಜಿನಿಯರಿಂಗ್ ಕೋರ್ಸ್‌ಗಳ ಪ್ರಥಮ ಡಿಪ್ಲೋಮಾದಲ್ಲಿ ವ್ಯಾಸಂಗ

ಮಾಡಲು ಇಚ್ಛಿಸುವ ಎಸ್.ಎಸ್.ಎಲ್.ಸಿ. ಉತ್ತೀರ್ಣರಾಗಿ ಒಟ್ಟಾರೆ ಶೇ 35 ಅಂಕಗಳನ್ನು ಪಡೆದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪ್ರವೇಶಕ್ಕೆ ಇರಬೇಕಾದ ಕನಿಷ್ಟ ವಿದ್ಯಾರ್ಹತೆ ಹಾಗೂ ಇತರೆ ಆರ್ಹತೆಗಳಿಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಯನ್ನು ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್ "ದಾಖಲೆ ಪರಿಶೀಲನೆ ಹಾಗೂ ಆನ್‌ಲೈನ್ ಅರ್ಜಿ ಸಲ್ಲಿಕೆ/ಆಪ್ಷನ್ ಎಂಟ್ರಿ ಸಹಾಯ ಕೇಂದ್ರಗಳಿಂದ ಕಚೇರಿ ವೇಳೆಯಲ್ಲಿ ಪಡೆಯಬಹುದಾಗಿದೆ.

ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಅರ್ಜಿಗಳನ್ನು ಮೇ 20 ರಿಂದ ಮೇ 30 ರವರೆಗೆ ಸರ್ಕಾರಿ ಅನುದಾನಿತ ಪಾಲಿಟೆಕ್ನಿಕ್‌ಗಳಿಂದ ಕಚೇರಿ ವೇಳೆಯಲ್ಲಿ ಸಲ್ಲಿಸಿ ಅರ್ಜಿ ಮತ್ತು ಮಾಹಿತಿ ಪುಸ್ತಕವನ್ನು ಪಡೆಯಬಹುದಾಗಿದೆ

ಭರ್ತಿಮಾಡಿದ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಸಲ್ಲಿಸಲು ದಾಖಲೆಗಳ ಪರಿಶೀಲನೆ ಮತ್ತು ಆನ್‌ಲೈನ್‌ನಲ್ಲಿ ಆಪ್ಷನ್ ಎಂಟ್ರಿ ದಾಖಲಿಸಲು ಸಂಬಂಧಿಸಿದ ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್ "ದಾಖಲೆ ಪರಿಶೀಲನೆ ಹಾಗೂ ಆನ್‌ಲೈನ್ ಅರ್ಜಿ ಸಲ್ಲಿಕೆ/ಆಪ್ಷನ್ ಎಂಟ್ರಿ ಸಹಾಯ ಕೇಂದ್ರಗಳಲ್ಲಿ ಮೇ 30 ರ ಸಂಜೆ 5-30 ರ ಒಳಗೆ ಎಲ್ಲಾ ಮೂಲ ದಾಖಲೆಗಳೊಂದಿಗೆ ಮತ್ತು ಒಂದು ಸೆಟ್ ಧೃಡೀಕೃತ ಜೆರಾಕ್ಸ್ ಪ್ರತಿಗಳು ಹಾಗೂ 3 ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಸಲ್ಲಿಸಲು ಕೋರಿದೆ.

ಬಾಬು:ಜಿಪಿಆರ್.

## <u>ಡಿಪ್ಲೋಮಾ ಸಿನೆಮಾಟೊಗ್ರಫಿ ಸೌಂಡ್ ರೆಕಾರ್ಡಿಂಗ್ ಇಂಜಿನಿಯರಿಂಗ್ ಕೋರ್ಸ್ ಪ್ರವೇಶ</u>

ಬೆಂಗಳೂರು, ಮೇ 19 (ಕರ್ನಾಟಕ ವಾರ್ತೆ)

ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆಯವತಿಯಿಂದ ಪ್ರಸಕ್ತ 2015-16 ನೇ ಸಾಲಿನ ಡಿಪ್ಲಮೋ ಸಿನೆಮಾಟೊಗ್ರಫಿ ಮತ್ತು ಸೌಂಡ್ ರೆಕಾರ್ಡಿಂಗ್ ಅಂಡ್ ಇಂಜಿನಿಯರಿಂಗ್ ಕೋರ್ಸ್‌ಗಳಿಗೆ ಪ್ರವೇಶಕ್ಕಾಗಿ ಅರ್ಜಿಗಳನ್ನು ನೀಡಲಾಗುತ್ತಿದೆ. ಸರ್ಕಾರಿ ಆದೇಶದ ಪ್ರಕಾರ ಹೊರ ರಾಜ್ಯದ ಅಭ್ಯರ್ಥಿಗಳಿಗೆ ಶೇ 50 ರಷ್ಟು ಪ್ರವೇಶಾವಕಾಶ ಕಲ್ಪಿಸಲಾಗಿದೆ.

ಅಭ್ಯರ್ಥಿಗಳು ಕರ್ನಾಟಕದ ದ್ವಿತೀಯ ಪಿ.ಯು.ಸಿ. ವಿಜ್ಞಾನ (ಪಿ.ಸಿ.ಎಂ.) ಅಥವಾ ತತ್ಸಮಾನ ಹಾಗೂ ಹೊರ ರಾಜ್ಯಗಳ ಅಭ್ಯರ್ಥಿಗಳು (+2) ತತ್ಸಮಾನ ಪರೀಕ್ಷೆಯಲ್ಲಿ ಎಲ್ಲಾ ವಿಷಯದಲ್ಲಿ ಒಟ್ಟಾರೆ ಶೇ 35 ಅಂಕ ಪಡೆದು ತೇರ್ಗಡೆಯಾಗಿರಬೇಕು. ಅರ್ಜಿಗಳನ್ನು ಪ್ರಾಂಶುಪಾಲರ ಕಚೇರಿ, ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆ, ಹೆಸರಘಟ್ಟ ಅಂಚೆ, ಬೆಂಗಳೂರು – 88. ಇಲ್ಲಿಂದ ರೂ. 300/- (ಎಸ್‌ಸಿ.ಎಸ್‌ಟಿ ಮತ್ತು ಪ್ರವರ್ಗ-1ರ ರೂ. 250/-) ಗಳನ್ನು ಪಾವತಿಸಿ ಖುದ್ದಾಗಿ ಪಡೆಯಬಹುದು, ಅಥವಾ ಪ್ರಾಂಶುಪಾಲರು, ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆ, ಹೆಸರಘಟ್ಟ, ಬೆಂಗಳೂರು – 8, ಇವರ ಹೆಸರಿನಲ್ಲಿ ರೂ. 375-00 (ಎಸ್‌ಸಿ/ಎಸ್‌ಟಿ ಮತ್ತು ಪ್ರವರ್ಗ – 1 ರ ಅಭ್ಯರ್ಥಿಗಳು ರೂ. 325/-) ಗಳ ಡಿ.ಡಿ.ಯನ್ನು ಕಳುಹಿಸಿ ಪಡೆಯಬಹುದು ಅರ್ಜಿಗಳನ್ನು ನೀಡುವ ಮತ್ತು ಭರ್ತಿಮಾಡಿದ ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ 30-5-2015. ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂ. 080 – 28466768, 28446672. **Email.gftihesaraghatt@gmail.com. Web: www.filminstitutebangalore.com** ಅನ್ನು ಸಂಪರ್ಕಿಸಲು ಕೋರಿದೆ.

ಬಾಬು:ಜಿಪಿಆರ್.

## ಬಿ. ವಿ. ಕಾರಂತ ಪ್ರಶಸ್ತಿ ಸ್ಥಾಪನೆ

**ಬೆಂಗಳೂರು, ಮೇ 19 (ಕರ್ನಾಟಕ ವಾರ್ತೆ)**

ರಾಜ್ಯ ಸರ್ಕಾರವು ಬಿ.ವಿ. ಕಾರಂತರ ಹೆಸರಿನಲ್ಲಿ ಕನ್ನಡ ಹವ್ಯಾಸಿ ರಂಗಕರ್ಮಿಗಳಿಗೆ ಪ್ರಶಸ್ತಿ ನೀಡಲಿದ್ದು ಈ ಪ್ರಶಸ್ತಿಗೆ ಬಿ. ವಿ. ಕಾರಂತ ಪ್ರಶಸ್ತಿ ಎಂದು ನಾಮಕರಣ ಮಾಡಿದೆ. ಈ ಪ್ರಶಸ್ತಿಯು ರೂ. 3.00 ಲಕ್ಷ ನಗದು ಬಹುಮಾನ ಪ್ರಶಸ್ತಿ, ಮುತ್ಥಳಿ, ಪ್ರಶಸ್ತಿ ಫಲಕ, ಶಾಲು, ಹಾರ ಫಲತಾಂಬೂಲಗಳನ್ನು ಒಳಗೊಂಡಿರುತ್ತದೆ.
**ಬಾಬು/ಕೆಎಂ**

## ಸಂತ ಶಿಶುನಾಳ ಷರೀಫ್ ಪ್ರಶಸ್ತಿ ಪ್ರಕಟ

**ಬೆಂಗಳೂರು, ಮೇ 19 (ಕರ್ನಾಟಕ ವಾರ್ತೆ)**

ರಾಜ್ಯ ಸರ್ಕಾರವು 2014 ನೇ ಸಾಲಿನ ಸಂತ ಶಿಶುನಾಳ ಷರೀಫ ಪ್ರಶಸ್ತಿಗಾಗಿ ಸುಗಮ ಸಂಗೀತ ಕ್ಷೇತ್ರದಲ್ಲಿ ಗಳಿಸಿದ ವಿದ್ವತ್ತು, ಸ್ವರ ಸಂಯೋಜನೆ, ಹೊರತರಲಾದ ಧ್ವನಿ ಸುರಳಿಗಳು, ನೀಡಿದ ಕಾರ್ಯಕ್ರಮಗಳು, ಸಂದ ಪ್ರಶಸ್ತಿಗಳು, ಹಿರಿತನ ಮುಂತಾದ ಅಂಶಗಳನ್ನು ಪರಿಗಣಿಸಿ ಗದಗ ಜಿಲ್ಲೆಯ ಶ್ರೀ ರಾಜಗುರು ಗುರುಸ್ವಾಮಿ ಕಲಿಕೇರಿ ಅವರನ್ನು ಆಯ್ಕೆ ಮಾಡಲಾಗಿದೆ.

ಶ್ರೀ ಸೋಮಸುಂದರಂ ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಆಯ್ಕೆ ಸಮಿತಿ ಈ ಆಯ್ಕೆ ಮಾಡಿದೆ.
ಬಾಬು/ಕೆಎಂ

## ವರ್ಣಶಿಲ್ಪಿ ವೆಂಕಟಪ್ಪ ಪ್ರಶಸ್ತಿ ಪ್ರಕಟ

**ಬೆಂಗಳೂರು, ಮೇ 19 (ಕರ್ನಾಟಕ ವಾರ್ತೆ)**

ರಾಜ್ಯ ಸರ್ಕಾರವು 2014 ನೇ ಸಾಲಿನ ವರ್ಣಶಿಲ್ಪಿ ವೆಂಕಟಪ್ಪ ಪ್ರಶಸ್ತಿಗಾಗಿ ಚಿತ್ರಕಲಾ ರಚನೆ, ಕಲಾ ಪ್ರದರ್ಶನ, ಶಿಬಿರಗಳ ಆಯೋಜನೆ ಹೀಗೆ ಚಿತ್ರಕಲಾ ಕ್ಷೇತ್ರದಲ್ಲಿ ಸಲ್ಲಿಸಿದ ಬಹುಮುಖ ಆಯಾಮಗಳ ಸಾಧನೆಯನ್ನು ಗಮನಿಸಿ ಬಳ್ಳಾರಿ ಜಿಲ್ಲೆಯ 82 ವರ್ಷ ವಯಸ್ಸಿನ ಹಿರಿಯ ಕಲಾವಿದರಾದ ಶ್ರೀ ವ್ಹಿ.ಟಿ. ಕಾಳೆ, ಅವರನ್ನು ಅವರನ್ನು ಆಯ್ಕೆ ಮಾಡಿದೆ.

ಶ್ರೀ ಯು. ಭಾಸ್ಕರರಾವ್ ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಆಯ್ಕೆ ಸಮಿತಿ ಈ ಆಯ್ಕೆ ಮಾಡಿದೆ.

ಬಾಬು/ಕೆಎಂ